ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2019-20

ನಿರ್ದೇಶಕರವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01,
ದಿನಾಂಕ: 22-12-2021

**<u>ಸುತ್ತೋಲೆ</u>**

ವಿಷಯ: ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದ ಅಂಗವಾಗಿ ಭಾರತ ಸಂವಿಧಾನದ ಮೂಲಭೂತ ಕರ್ತವ್ಯಗಳ ಬಗ್ಗೆ ವ್ಯಾಪಕ ಪ್ರಚಾರ ಪಡಿಸುವ ಕುರಿತು.

ಉಲ್ಲೇಖ : ರಾಜ್ಯ ಸರ್ಕಾರದ ಪತ್ರ ಸಂಖ್ಯೆ: ಯುಸೇಇ/ರಾಸೇಯೋ/12/2021/2021-22/390 ದಿನಾಂಕ: 22-12-2021

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಭಾರತ ಸಂವಿಧಾನದ ಮೂಲಭೂತ ಕರ್ತವ್ಯಗಳನ್ನು (ಪ್ರತಿ ಲಗತ್ತಿಸಿದೆ) ತಿಳಿದುಕೊಳ್ಳುವುದು ಮತ್ತು ಪಾಲಿಸುವುದು ಪ್ರತಿ ಪ್ರಜೆಯ ಕರ್ತವ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಛಾಯಚಿತ್ರಗಳನ್ನೊಳಗೊಂಡ ವರದಿಯನ್ನು ಅಂಚೆ ಮೂಲಕ ಆಯುಕ್ತಾಲಯದ ಎನ್.ಎಸ್ ಎಸ್ ಕೋಶಕ್ಕೆ ಹಾಗೂ ಪ್ರತಿಯನ್ನು ಕಛೇರಿಯ ಮಿಂಚಂಚೆ nssdte@gmail.com ವಿಳಾಸಕ್ಕೆ ಕಳುಹಿಸಲು ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ನಿರ್ದೇಶಕರು

ಪ್ರತಿ:-

1. ರಾಜ್ಯ ಎನ್.ಎಸ್.ಎಸ್ ಅಧಿಕಾರಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು-01
2. ಕಛೇರಿ ಕಡತಕ್ಕೆ.

## [1][ಭಾಗ - IVಎ

### ಮೂಲಭೂತ ಕರ್ತವ್ಯಗಳು

51ಎ. ಮೂಲಭೂತ ಕರ್ತವ್ಯಗಳು:- ಕೆಳಕಂಡ ಕರ್ತವ್ಯಗಳನ್ನು ಪಾಲಿಸುವುದು ಭಾರತದ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿರತಕ್ಕದ್ದು ಎಂದರೆ:-

(ಎ) ಸಂವಿಧಾನಕ್ಕೆ ಬದ್ಧವಾಗಿರುವುದು ಹಾಗೂ ಅದರ ಆದರ್ಶಗಳನ್ನು ಮತ್ತು ಸಂಸ್ಥೆಗಳನ್ನು, ರಾಷ್ಟ್ರಧ್ವಜವನ್ನು ಹಾಗೂ ರಾಷ್ಟ್ರಗೀತೆಯನ್ನು ಗೌರವಿಸುವುದು;

(ಬಿ) ನಮ್ಮ ರಾಷ್ಟ್ರೀಯ ಸ್ವಾತಂತ್ರ್ಯ ಸಂಗ್ರಾಮಕ್ಕೆ ಸ್ಫೂರ್ತಿದಾಯಕವಾಗಿದ್ದ ಉದಾತ್ತ ಆದರ್ಶಗಳನ್ನು ಗೌರವಿಸುವುದು ಮತ್ತು ಅನುಸರಿಸುವುದು;

(ಸಿ) ಭಾರತದ ಸಾರ್ವಭೌಮತ್ವವನ್ನು, ಐಕ್ಯತೆಯನ್ನು ಮತ್ತು ಅಖಂಡತೆಯನ್ನು ಎತ್ತಿ ಹಿಡಿಯುವುದು ಹಾಗೂ ಸಂರಕ್ಷಿಸುವುದು;

(ಡಿ) ದೇಶವನ್ನು ರಕ್ಷಿಸುವುದು ಮತ್ತು ಕರೆಬಂದಾಗ ರಾಷ್ಟ್ರಕ್ಕೆ ಸೇವೆ ಸಲ್ಲಿಸುವುದು;

(ಇ) ಧಾರ್ಮಿಕ, ಭಾಷಾ ಮತ್ತು ಪ್ರಾದೇಶಿಕ ಅಥವಾ ಜಾತಿ ಪಂಗಡಗಳ ಭೇದಭಾವಗಳಿಂದ ಅತೀತವಾಗಿ, ಭಾರತದ ಎಲ್ಲಾ ಜನತೆಯಲ್ಲಿ ಸಾಮರಸ್ಯವನ್ನು ಮತ್ತು ಸಮಾನ ಭ್ರಾತೃತ್ವದ ಭಾವನೆಯನ್ನು ಬೆಳೆಸುವುದು ಮತ್ತು ಸ್ತ್ರೀಯರ ಗೌರವಕ್ಕೆ ಕುಂದುಂಟುಮಾಡುವ ಆಚರಣೆಗಳನ್ನು ಬಿಟ್ಟುಬಿಡುವುದು;

(ಎಫ್) ನಮ್ಮ ಸಮ್ಮಿಶ್ರ ಸಂಸ್ಕೃತಿಯ ಭವ್ಯಪರಂಪರೆಯನ್ನು ಗೌರವಿಸುವುದು ಹಾಗೂ ಕಾಪಾಡುವುದು;

(ಜಿ) ಅರಣ್ಯಗಳು, ಸರೋವರಗಳು, ನದಿಗಳು ಮತ್ತು ವನ್ಯಜೀವಿಗಳು ಸೇರಿದಂತೆ ನೈಸರ್ಗಿಕ ಪರಿಸರವನ್ನು ಸಂರಕ್ಷಿಸುವುದು ಹಾಗೂ ಅಭಿವೃದ್ಧಿಗೊಳಿಸುವುದು ಮತ್ತು ಪ್ರಾಣಿಗಳಿಗೆ ಅನುಕಂಪ ತೋರಿಸುವುದು;

(ಹೆಚ್) ವೈಜ್ಞಾನಿಕ ಮನೋಭಾವನೆ, ಮಾನವೀಯತೆ, ಜಿಜ್ಞಾಸೆಯ ಮತ್ತು ಸುಧಾರಣೆಯ ಪ್ರವೃತ್ತಿಗಳನ್ನು ಬೆಳೆಸುವುದು;

(ಐ) ಸಾರ್ವಜನಿಕ ಸ್ವತ್ತನ್ನು ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು;

(ಜೆ) ರಾಷ್ಟ್ರವು ನಿರಂತರವಾಗಿ ಸಾಧನೆಯ ಮತ್ತು ಸಿದ್ಧಿಯ ಉನ್ನತ ಮಟ್ಟಗಳನ್ನು ತಲುಪಲು ವೈಯಕ್ತಿಕ ಹಾಗೂ ಸಾಮೂಹಿಕ ಚಟುವಟಿಕೆಯ ಎಲ್ಲಾ ಕಾರ್ಯಕ್ಷೇತ್ರಗಳಲ್ಲಿ ಉನ್ನತಿಗಾಗಿ ಶ್ರಮಿಸುವುದು.]

*[(ಕೆ) ತಂದೆ- ತಾಯಿ ಅಥವಾ ಪೋಷಕನು, ಸಂದರ್ಭಾನುಸಾರ ಆರರಿಂದ ಹದಿನಾಲ್ಕು ವಯಸ್ಸಿನ ತಮ್ಮ ಮಗುವಿಗೆ ಅಥವಾ ತಮ್ಮ ಪರಿಪಾಲಿತ ಮಗುವಿಗೆ ಶಿಕ್ಷಣ ಪಡೆಯಲು ಅವಕಾಶಗಳನ್ನು ಒದಗಿಸುವುದು.]

---

1. 1976ನೇ ಇಸವಿಯ ಸಂವಿಧಾನ (ನಲವತ್ತೆರಡನೆಯ ತಿದ್ದುಪಡಿ) ಅಧಿನಿಯಮದ 11ನೇ ಪ್ರಕರಣದ ಮೂಲಕ (3-1-1977ರಿಂದ ಜಾರಿಗೆ ಬರುವಂತೆ) ಸೇರಿಸಲಾಗಿದೆ.

* 2002 ನೇ ಇಸವಿಯ ಸಂವಿಧಾನ (ಎಂಬತ್ತಾರನೆಯ ತಿದ್ದುಪಡಿ) ಅಧಿನಿಯಮದ 4ನೆಯ ಪ್ರಕರಣದ ಮೂಲಕ ಸೇರಿಸಲಾಗಿದೆ (ಇದು ಇನ್ನೂ ಜಾರಿಗೆ ಬಂದಿರುವುದಿಲ್ಲ, ದಿನಾಂಕವನ್ನು ನಂತರ ಅಧಿಸೂಚಿಸಲಾಗುವುದು).